# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕೃಷಿ ಭಾಗ್ಯದ ಕಾರ್ಯಕ್ರಮದಡಿ ಕಳೆದ ನಾಲ್ಕು ವರ್ಷಗಳಿಂದ ನಿರಂತರ ಬರಕ್ಕೆ ತುತ್ತಾದ 7 ಜಿಲ್ಲೆಗಳಲ್ಲಿನ 23 ತಾಲ್ಲೂಕುಗಳಿಗೆ ವಿಶೇಷ ಪ್ಯಾಕೇಜ್ ಅನ್ನು ಸಿದ್ದಪಡಿಸಲು ಸಮಿತಿ ರಚನೆ ಬಗ್ಗೆ.

********

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಕೃಇ 08 ಕೃಯೋಕಾ 2014, ದಿನಾಂಕ:27-07-2014 ಮತ್ತು ಸೇರ್ಪಡೆ ಆದೇಶ ದಿನಾಂಕ:12-01-2015.
2. ಮಾನ್ಯ ಮುಖ್ಯ ಮಂತ್ರಿಗಳ 2015-16ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 24.
3. ದಿನಾಂಕ: 22-04-2015 ರಂದು ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿ
4. ದಿನಾಂಕ: 29-10-2015 ರಂದು ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿ

*******

**ಪ್ರಸ್ತಾವನೆ:-**

ಮೇಲೆ ಓದಲಾದ(1)ರ ಆದೇಶಗಳಲ್ಲಿ ಮಳೆಯ ಆಧಾರಿತ ಕೃಷಿಯನ್ನು ಸುಧಾರಿಸುವ ನಿಟ್ಟಿನಲ್ಲಿ ಕೃಷಿ ಭಾಗ್ಯ ಯೋಜನೆಯನ್ನು 2014-15 ನೇ ಸಾಲಿನಿಂದ ಅನುಷ್ಠಾನಗೊಳಿಸಲು ಆದೇಶಿಸಿದೆ.

ಮೇಲೆ ಓದಲಾದ(2)ರ ಮಾನ್ಯ ಮುಖ್ಯ ಮಂತ್ರಿಗಳ 2015-16ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 24ರಲ್ಲಿ **"ಈ ವರ್ಷ ಕೃಷಿ ಭಾಗ್ಯ ಅಂಗವಾಗಿ ಕಳೆದ 4 ವರ್ಷಗಳಿಂದ ನಿರಂತರ ಬರಕ್ಕೆ ತುತ್ತಾದ 7 ಜಿಲ್ಲೆಗಳಲ್ಲಿನ 23 ತಾಲ್ಲುಕುಗಳಿಗೆ ವಿಶೇಷ ಪ್ಯಾಕೇಜ್‌ನ್ನು ಸಿದ್ದಪಡಿಸಲಾಗಿದೆ. ಈ ಪ್ಯಾಕೇಜ್ ಹನಿ/ತುಂತುರು ನೀರಾವರಿ ಜೋತೆ ಫರ್ಟಿಗೇಷನ್ ಹಾಗೂ ಪಾಲಿಹೌಸ್‌ಗಳನ್ನು ಒಳಗೊಂಡಿದ್ದು, ಬರದಿಂದ ಕಂಗೆಟ್ಟ ಈ ಪ್ರದೇಶಗಳ ಅಭಿವೃದ್ಧಿಗೆ ನೇರವಾಗಲಿದೆ."** ಎಂದು ಘೋಷಿಸಿರುತ್ತಾರೆ.

ಮೇಲೆ ಓದಲಾದ (3) ಮತ್ತು (4)ರಲ್ಲಿ ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆರವರು ಕೃಷಿ ಭಾಗ್ಯ ಯೋಜನೆಯ ವಿಶೇಷ ಪ್ಯಾಕೇಜ್ ಬಗ್ಗೆ ವರದಿ ತಯಾರಿಸಲು ಕುಲಪತಿ, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ ಇವರ ಅಧ್ಯಕ್ಷತೆಯಲ್ಲಿ ಒಂದು ಸಮಿತಿ ರಚಿಸಿ ವರದಿ ತಯಾರಿಸಲು ಸೂಚಿಸಿರುತ್ತಾರೆ.

ಮಾನ್ಯ ಮುಖ್ಯ ಮಂತ್ರಿಯವರು ಆಯವ್ಯಯ ಭಾಷಣದಲ್ಲಿ ಘೋಷಿದಂತೆ ಕೃಷಿ ಭಾಗ್ಯ (Special Package) ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಕರ್ನಾಟಕ ರಾಜ್ಯದ ಬರಪೀಡಿತ ತಾಲ್ಲೂಕುಗಳಲ್ಲಿನ ರೈತರ ಅಭಿವೃದ್ಧಿಗಾಗಿ ಒಂದು ವಿಶೇಷ ಪ್ಯಾಕೇಜ್ ಯೋಜನೆ (Special Package) ತಯಾರಿಸುವ ಸಲುವಾಗಿ ಸಮಿತಿ ರಚನೆ, ಅದರ ಕರ್ತವ್ಯ ಮತ್ತು ಜವಾಬ್ದಾರಿ ಮತ್ತು ವರದಿ ತಯಾರಿಸುವ ಅವಶ್ಯಕತೆಯಿದೆ.

**ಸರ್ಕಾರಿ ಆದೇಶ ಸಂಖ್ಯೆ: ಕೃಇ 116 ಕೃಯೋಕಾ 2015, ಬೆಂಗಳೂರು ದಿನಾಂಕ: 13-11-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ ಕರ್ನಾಟಕ ರಾಜ್ಯದ ಬರಪೀಡಿತ ತಾಲ್ಲೂಕುಗಳಲ್ಲಿನ ರೈತರ ಅಭಿವೃದ್ಧಿಗಾಗಿ ಒಂದು ವಿಶೇಷ ಪ್ಯಾಕೇಜ್ ಯೋಜನೆ (Special Package) ತಯಾರಿಸುವ ಸಲುವಾಗಿ ಈ ಕೆಳಕಂಡಂತೆ ಸಮಿತಿಯನ್ನು ರಚಿಸಲಾಗಿದೆ.

| ಕ್ರ.ಸಂ. | ಹುದ್ದೆ ಮತ್ತು ಸಂಸ್ಥೆ | ಸ್ಥಾನಮಾನ |
|---|---|---|
| 1. | ಕುಲಪತಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ. | ಅಧ್ಯಕ್ಷರು |
| 2. | ಕುಲಪತಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಬಾಗಲಕೋಟೆ ಅಥವಾ ಅವರ ಪ್ರತಿನಿಧಿ | ಸದಸ್ಯರು |
| 3. | ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಧಾರವಾಡ ಅಥವಾ ಅವರ ಪ್ರತಿನಿಧಿ | ಸದಸ್ಯರು |
| 4. | ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು ಅಥವಾ ಅವರ ಪ್ರತಿನಿಧಿ | ಸದಸ್ಯರು |
| 5. | ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ರಾಯಚೂರು ಅಥವಾ ಅವರ ಪ್ರತಿನಿಧಿ | ಸದಸ್ಯರು |
| 6. | ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ | ಸದಸ್ಯರು |
| 7. | ನಿರ್ದೇಶಕರು, ಭಾರತೀಯ ಕೃಷಿ ಸಂಶೋಧನೆ ಸಂಸ್ಥೆ, ಹೆಸರಘಟ್ಟ, ಬೆಂಗಳೂರು. | ಸದಸ್ಯರು |
| 8. | ಶ್ರೀ ಜೋಷಿ, ಜೈನ್ ಇರಿಗೇಷನ್, ಬೆಂಗಳೂರು. | ಸದಸ್ಯರು |
| 9. | ನಿರ್ದೇಶಕರು, ಕೃಷಿ ಇಲಾಖೆ | ಸದಸ್ಯ ಕಾರ್ಯದರ್ಶಿ |

**ಈ ಸಮಿತಿಯ ಕರ್ತವ್ಯಗಳು ಮತ್ತು ಜವಾಬ್ದಾರಿಗಳು ಈ ಕೆಳಕಂಡಂತೆ ಇದೆ.**

- ಪ್ಯಾಕೇಜ್‌ನ ಘಟಕಗಳನ್ನು ನಿಗದಿಪಡಿಸುವುದು, ಘಟಕವಾರು ಅಂದಾಜು ವೆಚ್ಚ, ಪ್ಯಾಕೇಜ್‌ನ ಒಟ್ಟು ಮೊತ್ತ, ಸಹಾಯಧನ ಮೊತ್ತವನ್ನು ಶಿಫಾರಸ್ಸು ಮಾಡುವುದು.
- ಫಲಾನುಭವಿಗಳ ಆಯ್ಕೆ ವಿಧಾನ ಮತ್ತು ಅರ್ಹತೆ ಸಿದ್ದಪಡಿಸುವುದು.
- ಬೆಳೆಗಳ ಇಳುವರಿ, ಆದಾಯ ಹಾಗೂ ಮಾರುಕಟ್ಟೆ ಅವಕಾಶಗಳನ್ನು ಪರಿಗಣಿಸಿ ಯೋಜನೆಯ ರೂಪು- ರೇಷಗಳನ್ನು ತಯಾರಿಸುವುದು.
- ಅಗತ್ಯಕ್ಕೆ ಅನುಗುಣವಾಗಿ ಸಭೆ ಏರ್ಪಡಿಸಿ ಯೋಜನೆಯ ಅನುಷ್ಠಾನದ ಬಗ್ಗೆ ಮಾಹಿತಿ ಹಾಗೂ ಮಾರ್ಗದರ್ಶನ ನೀಡುವುದು.

ಈ ಸಮಿತಿಯು ಕರ್ನಾಟಕ ರಾಜ್ಯದ ಬರಪೀಡಿತ ತಾಲ್ಲೂಕುಗಳಲ್ಲಿನ ರೈತರ ಅಭಿವೃದ್ಧಿಗಾಗಿ ಒಂದು ವಿಶೇಷ ಪ್ಯಾಕೇಜ್ ಯೋಜನೆ (Special Package) ವರದಿಯನ್ನು ಒಂದು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ,

ಆರ್.ಎಸ್.ಶಿವಕುಮಾರ
(ಆರ್.ಎಸ್.ಶಿವಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಯೋಜನೆ.

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ & ಸಾಮಾಜಿಕ ಘಟಕಗಳ ಲೆಕ್ಕಪರಿಶೋಧನೆ ಇತ್ಯಾದಿ) ಕರ್ನಾಟಕ, ಹೊಸ ಕಟ್ಟಡ, ಪಿ.ಬಿ. ನಂ. 5398, ಬೆಂಗಳೂರು -01.
2. ಪ್ರಧಾನ ಮಹಾಲೇಖಪಾಲರು, (ಲೆಕ್ಕಪತ್ರ ಮತ್ತು ಹಕ್ಕುದಾರಿ) ಕರ್ನಾಟಕ, ಹೊಸ ಕಟ್ಟಡ, ಪಿ.ಬಿ. ನಂ. 5398, ಬೆಂಗಳೂರು -01.
3. ಮಹಾಲೇಖಪಾಲರು, (ಡಬ್ಲ್ಯೂಎಫ್ & ಆರ್ಎ) ಕಂದಾಯ ಲೆಕ್ಕಪರಿಶೋಧನೆ ವಿಭಾಗ, ಬೆಂಗಳೂರು -01.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು
5. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ.
7. ಸರ್ಕಾರದ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ
8. ಆಯುಕ್ತರು, ಕೃಷಿ ಇಲಾಖೆ
9. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ.
10. ಕುಲಪತಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ.
11. ಕುಲಪತಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಬಾಗಲಕೋಟೆ.
12. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಧಾರವಾಡ,
13. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು.
14. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ರಾಯಚೂರು
15. ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
16. ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು
17. ನಿರ್ದೇಶಕರು, ಭಾರತೀಯ ಕೃಷಿ ಸಂಶೋಧನೆ ಸಂಸ್ಥೆ, ಹೆಸರಘಟ್ಟ, ಬೆಂಗಳೂರು.
18. ಅಪರ ನಿರ್ದೇಶಕರು, ಜಾಗೃತ ಕೋಶ, ವಿಶ್ವೇಶ್ವರಯ್ಯ ಟವರ್, ಮೋಡಿಯಂ ಬ್ಲಾಕ್, ಬೆಂಗಳೂರು
19. ಶ್ರೀ ಜೋಷಿ, ಜೈನ್ ಇರಿಗೇಷನ್, ಬೆಂಗಳೂರು.
20. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಕ್ರ.ಸಂ.9 ರಿಂದ 19ರವರೆಗೆ ಕೃಷಿ ಆಯುಕ್ತರ ಮೂಲಕ**